# ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 149 (190) |
| ಸದಸ್ಯರ ಹೆಸರು | : | ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 14-12-2021 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಲ್ಲಿ ಚಿಕ್ಕಮಗಳೂರು ನಗರಸಭೆ ವ್ಯಾಪ್ತಿಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳು ಯಾವ ಹಂತದಲ್ಲಿವೆ; ಇವುಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು; (ವಿವರ ನೀಡುವುದು) | ಚಿಕ್ಕಮಗಳೂರು ನಗರಸಭೆಗೆ ಕಳೆದ ಮೂರು ವರ್ಷಗಳಲ್ಲಿ ಎಸ್.ಎಫ್.ಸಿ ಮುಕ್ತನಿಧಿ / ವಿಶೇಷ ಅನುದಾನ ಹಾಗೂ ಎಸ್.ಎಫ್.ಸಿ ಕುಡಿಯುವ ನೀರಿನ ಅನುದಾನದಡಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳ ವಿವರವನ್ನು **ಅನುಬಂಧ-01** ರಂತೆ ಲಗತ್ತಿಸಿದೆ.<br><br>1) **14ನೇ ಹಣಕಾಸು ಆಯೋಗದ ಅನುದಾನ:** 2018-19 ಮತ್ತು 2019-20ನೇ ಸಾಲಿನಲ್ಲಿ ಚಿಕ್ಕಮಗಳೂರು ನಗರಸಭೆಯ ವ್ಯಾಪ್ತಿಯಲ್ಲಿ ಕೈಗೊಂಡ ಕಾಮಗಾರಿಗಳ ವಿವರಗಳನ್ನು **ಅನುಬಂಧ-02** ರಲ್ಲಿ ಲಗತ್ತಿಸಿದೆ. ಕೈಗೊಂಡ 58 ಕಾಮಗಾರಿಗಳಲ್ಲಿ 56 ಕಾಮಗಾರಿಗಳನ್ನು ಪೂರ್ಣಗೊಳಿಸಿದೆ. 1 ಕಾಮಗಾರಿ ಪ್ರಗತಿಯಲ್ಲಿದೆ ಮತ್ತು 1 ಕಾಮಗಾರಿ ಟೆಂಡರ್ ಕರೆಯಲು ಬಾಕಿ ಇದೆ. ಬಾಕಿ ಇರುವ ಕಾಮಗಾರಿಗಳನ್ನು ಜನವರಿ 2022ರ ಅಂತ್ಯದಲ್ಲಿ ಪೂರ್ಣಗೊಳಿಸಲಾಗುವುದು.<br>2) **15ನೇ ಹಣಕಾಸು ಆಯೋಗ ಅನುದಾನ** : (2020-21) 2020-21ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನದಡಿ ಕೈಗೊಂಡಿರುವ ಕಾಮಗಾರಿಗಳ ವಿವರ **ಅನುಬಂಧ-03** ರಲ್ಲಿ ಲಗತ್ತಿಸಿದೆ.<br><br>2020-21ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನದಲ್ಲಿ ಕೈಗೊಂಡ 24 ಕಾಮಗಾರಿಗಳಲ್ಲಿ 13 ಕಾಮಗಾರಿಗಳು ಪೂರ್ಣಗೊಂಡಿವೆ. 4 ಕಾಮಗಾರಿಗಳು ಪ್ರಗತಿಯಲ್ಲಿವೆ. 5 ಕಾಮಗಾರಿಗಳು ಟೆಂಡರ್ ಪ್ರಕ್ರಿಯೆಯಲ್ಲಿವೆ, 2 ಕಾಮಗಾರಿಗಳಿಗೆ ಟೆಂಡರ್ ಕರೆಯಲು ಬಾಕಿ ಇದೆ. ಬಾಕಿ ಉಳಿದಿರುವ ಕಾಮಗಾರಿಗಳನ್ನು ಮಾರ್ಚ್ 2022ರ ಒಳಗೆ ಪೂರ್ಣಗೊಳಿಸಲಾಗುವುದು.<br><br>3) **ಅಮೃತ್ ಯೋಜನೆ:** (2015-16 ರಿಂದ 2021-22) ಕೇಂದ್ರ ಪುರಸ್ಕೃತ ಅಮೃತ್ ಯೋಜನೆಯಡಿ ಚಿಕ್ಕಮಗಳೂರು ನಗರಸಭೆ ವ್ಯಾಪ್ತಿಯಲ್ಲಿ ಅಮೃತ್ ಯೋಜನಾ ಅವಧಿಯಲ್ಲಿ ಕೈಗೊಂಡ ಕಾಮಗಾರಿಗಳ ವಿವರಗಳನ್ನು **ಅನುಬಂಧ-04** ರಲ್ಲಿ ಲಗತ್ತಿಸಿದೆ. |

<table>
<tr>
<td></td>
<td></td>
<td>ಕೇಂದ್ರ ಪುರಸ್ಕೃತ ಅಮೃತ್ ಯೋಜನೆಯಡಿ ನಗರಸಭೆ ವತಿಯಿಂದ ಕೈಗೊಂಡಿರುವ 9 ಕಾಮಗಾರಿಗಳಲ್ಲಿ 7 ಕಾಮಗಾರಿಗಳು ಪೂರ್ಣಗೊಂಡಿವೆ 2 ಕಾಮಗಾರಿಗಳು ಪ್ರಗತಿಯಲ್ಲಿದ್ದು, ಶೇ.90ರಷ್ಟು ಭೌತಿಕ ಪ್ರಗತಿ ಸಾಧಿಸಲಾಗಿದೆ. ಸದರಿ ಕಾಮಗಾರಿಗಳನ್ನು 1 ತಿಂಗಳ ಅವಧಿಯ ಒಳಗೆ ಪೂರ್ಣಗೊಳಿಸಲಾಗುವುದು.<br><br>
ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಕೈಗೊಂಡಿರುವ 2 ನೀರು ಸರಬರಾಜು ಕಾಮಗಾರಿಗಳಲ್ಲಿ 1 ಕಾಮಗಾರಿ ಪೂರ್ಣಗೊಂಡಿದೆ. 1 ಕಾಮಗಾರಿ ಪ್ರಗತಿಯಲ್ಲಿದ್ದು, ಜನವರಿ 2022ರ ಅಂತ್ಯಕ್ಕೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.<br><br>
4) ಕೇಂದ್ರ ಪುರಸ್ಕೃತ ಸ್ವಚ್ಛ ಭಾರತ ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ಚಿಕ್ಕಮಗಳೂರು ಐ.ಇ.ಸಿ ಮತ್ತು ಘನತ್ಯಾಜ್ಯ ವಸ್ತು ನಿರ್ವಹಣೆಗೆ ಸಂಬಂಧಿಸಿದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು ಸದರಿ ಕಾಮಗಾರಿಗಳ ವಿವರಗಳನ್ನು ಅನುಬಂಧ-5 ರಲ್ಲಿ ಲಗತ್ತಿಸಿದೆ.<br>
5) ಕಳೆದ ಮೂರು ವರ್ಷಗಳಲ್ಲಿ ಚಿಕ್ಕಮಗಳೂರು ನಗರಸಭೆ ವ್ಯಾಪ್ತಿಯಲ್ಲಿ ನಗರೋತ್ಥಾನ (ಮುನಿಸಿಪಾಲಿಟಿ)-3ನೇ ಹಂತದ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳ ವಿವರವನ್ನು ಅನುಬಂಧ-06ರಲ್ಲಿ ಲಗತ್ತಿಸಿದೆ.</td>
</tr>
<tr>
<td>ಆ)</td>
<td>ಈ ಕಾಮಗಾರಿಗಳಿಗೆ ಸರ್ಕಾರದಿಂದ ಮಂಜೂರಾಗಿರುವ ಅನುದಾನವೆಷ್ಟು; ಅದರಲ್ಲಿ ಬಿಡುಗಡೆಯಾಗಿರುವ ಹಣವೆಷ್ಟು? (ಮಾಹಿತಿ ನೀಡುವುದು).</td>
<td>ಚಿಕ್ಕಮಗಳೂರು ನಗರಸಭೆಗೆ ಕಳೆದ ಮೂರು ವರ್ಷಗಳಲ್ಲಿ ಎಸ್.ಎಫ್.ಸಿ ಮುಕ್ತನಿಧಿ/ವಿಶೇಷ ಅನುದಾನ ಹಾಗೂ ಎಸ್.ಎಫ್.ಸಿ ಕುಡಿಯುವ ನೀರಿನ ಅನುದಾನದಡಿ ಮಂಜೂರಾಗಿರುವ, ಬಿಡುಗಡೆಯಾಗಿರುವ ಅನುದಾನದ ವಿವರವನ್ನು ಅನುಬಂಧ-07 ರಲ್ಲಿ ಲಗತ್ತಿಸಿದೆ.<br><br>
ಚಿಕ್ಕಮಗಳೂರು ನಗರಸಭೆಗೆ 14ನೇ ಹಣಕಾಸು ಆಯೋಗದ ಅನುದಾನದಡಿ ಮತ್ತು 15ನೇ ಹಣಕಾಸು ಆಯೋಗದ ಅನುದಾನದಡಿ ಕೈಗೊಂಡ ಕಾಮಗಾರಿಗಳಿಗೆ ಮಂಜೂರಾದ ಅನುದಾನದ ವಿವರ ಈ ಕೆಳಕಂಡಂತಿದೆ.<br>
(ರೂ. ಲಕ್ಷಗಳಲ್ಲಿ)
<table>
<tr><th>ಕ್ರ. ಸಂ</th><th>ಯೋಜನೆ</th><th>ಸಾಲು</th><th>ಮಂಜೂರಾದ ಅನುದಾನ</th><th>ಬಿಡುಗಡೆಯಾದ ಅನುದಾನ</th></tr>
<tr><td rowspan="2">1</td><td rowspan="2">14ನೇ ಹಣಕಾಸು ಆಯೋಗದ ಅನುದಾನ</td><td>2018-19</td><td>783.45</td><td>783.45</td></tr>
<tr><td>2019-20</td><td>583.61</td><td>583.61</td></tr>
<tr><td>2</td><td>15ನೇ ಹಣಕಾಸು</td><td>2020-21</td><td>785.00</td><td>785.00</td></tr>
</table>
</td>
</tr>
</table>

| | | | | |
|---|---|---|---|---|
| | ಆಯೋಗದ ಅನುದಾನ | | | |
| 3 | ಅಮೃತ್ ಯೋಜನೆ | 2015-16 ರಿಂದ 2021-22 | 11932.00 | 11489.00 * |

* ನಗರ ಸ್ಥಳೀಯ ಸಂಸ್ಥೆಯ ವಂತಿಕೆ ಸೇರಿ

ಸ್ವಚ್ಛ ಭಾರತ ಯೋಜನೆಯಡಿ ಚಿಕ್ಕಮಗಳೂರು ನಗರ ಸಭೆಗೆ ಐ.ಇ.ಸಿ ಕಾರ್ಯಕ್ರಮಗಳಿಗೆ ರೂ.10.00 ಲಕ್ಷಗಳನ್ನು ಮತ್ತು ಘನತ್ಯಾಜ್ಯ ವಸ್ತು ನಿರ್ವಹಣೆಯ ಕಾಮಗಾರಿಗಳಿಗೆ ರೂ.280.43ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.

ಚಿಕ್ಕಮಗಳೂರು ನಗರಸಭೆಗೆ **ನಗರೋತ್ಥಾನ (ಮುನಿಸಿಪಾಲಿಟಿ)-3ನೇ ಹಂತದ ಯೋಜನೆಯಡಿ** ಸದರಿ ಕಾಮಗಾರಿಗಳಿಗೆ ರೂ.3500.00ಲಕ್ಷಗಳು ಹಂಚಿಕೆಯಾಗಿದ್ದು, ರೂ.1954.47ಲಕ್ಷಗಳು ಬಿಡುಗಡೆಯಾಗಿರುತ್ತದೆ.

ಕಡತ ಸಂಖ್ಯೆ:ನಅಇ 491 ಎಸ್.ಎಫ್.ಸಿ 2021

**[ಎನ್. ನಾಗರಾಜ್ (ಎಂ.ಟಿ.ಬಿ)]**
ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು